ಕ್ಷೇತ್ರ ಶಿಕ್ಷಣಾಧಿಕಾರಿಗಳವರ ಕಛೇರಿ, ಬೆಂಗಳೂರು ದಕ್ಷಿಣ ವಲಯ-1, ಬಿ.ಪಿ ವಾಡಿಯಾ ರಸ್ತೆ, ಬಸವನಗುಡಿ,
ಬೆಂಗಳೂರು-560004

ಸಂಖ್ಯೆ ಆ 6. ಪ್ರಾ.ಶಿ.ಪ್ರಾ.ಶಾ.ನೋಂ /07/2005-06 ದಿನಾಂಕ :29/06/2005

## ನಮೂನೆ - 2

(ಉಪನಿಯಮ 5(ಬಿ) ನಿಯಮ 3)

## ಪ್ರಮಾಣ ಪತ್ರ, ಸಂಖ್ಯೆ ::54

ಈ ಮೂಲಕ ಪ್ರಮಾಣೀಕರಿಸುವುದೇನೆಂದರೆ ಈ ಕೆಳಕಂಡ ಶಿಕ್ಷಣ ಸಂಸ್ಥೆಗೆ ಕರ್ನಾಟಕ ಸರ್ಕಾರ ಶಿಕ್ಷಣ ಕಾಯ್ದೆ 1983 (ನಿಯಮ 31) ರ ಪ್ರಕಾರ ಈ ದಿನ ಎರಡು ಸಾವಿರದ ಐದನೇ ಇಸವಿ ಜೂನ್ ತಿಂಗಳ ಇಪ್ಪತ್ತೊಂಬತ್ತನೇ ತಾರೀಖಿನಂದು ಖಾಸಗಿ ಕನ್ನಡ ಕಿರಿಯ ಪ್ರಾಥಮಿಕ ಶಾಲೆಯನ್ನು ನಡೆಸಲು ಈ ಕೆಳಕಂಡಂತೆ ಅನುಮತಿ ನೀಡಿದೆ.

| | | | |
|---|---|---|---|
| 1 | ಶಿಕ್ಷಣ ಸಂಸ್ಥೆಯ ಹೆಸರು | : | ಭೀಮಚಂದ್ರ ಎಜುಕೇಷನಲ್ ಟ್ರಸ್ಟ್, ನಂ.212, 38ನೇ ಕ್ರಾಸ್, 8ನೇ ಬ್ಲಾಕ್, ಜಯನಗರ ಬೆಂಗಳೂರು-560082 |
| 2 | ಶಾಲೆಯ ಹೆಸರು ಮತ್ತು ವಿಳಾಸ | : | ಹಿಲ್‌ಸೈಡ್ ಇಂಟರ್‌ನ್ಯಾಷನಲ್ ಪಬ್ಲಿಕ್ ಸ್ಕೂಲ್, ಸರ್ವೆ ನಂ. 24/4, ಗುಬ್ಬಲಾಳಗ್ರಾಮ, ಉತ್ತರಹಳ್ಳಿ ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು. |
| 3 | ಕ್ರಮಾಂಕ | : | 54 |
| 4 | ಶಿಕ್ಷಣ ಶಾಲೆಯ ತರಗತಿಗಳ ವಿವರ | : | I-V ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ |
| 5 | ಅನುಮತಿ ನೀಡಿದ ತರಗತಿಗಳು | : | I-V ನೇ ತರಗತಿಯವರೆಗೆ ಕನ್ನಡ ಮಾಧ್ಯಮದಲ್ಲಿ |
| 6 | ಪ್ರಾರಂಭಿಸಲಾದ ಶೈಕ್ಷಣಿಕ ವರ್ಷ | : | 2005-2006 |
| 7 | ಮಾಧ್ಯಮ | : | ಕನ್ನಡ ಮಾಧ್ಯಮ |
| 8 | ಶುಲ್ಕ ಪಾವತಿ ಮಾಡಿದ ವಿವರ | : | ರೂ.5,000 ಹುಂಡಿ ಸಂಖ್ಯೆ 142033 |

ಈ ಸದರಿ ಶಿಕ್ಷಣ ಸಂಸ್ಥೆಯ ಮೇಲ್ಕಂಡ ಮಾಹಿತಿಗಳನ್ನು ಈ ಕಛೇರಿಯ ದಾಖಲೆ ವಹಿ ಪುಟ ಸಂಖ್ಯೆ 124 ಕ್ರಮಾಂಕ 54 ರಲ್ಲಿ ನಮೂದಿಸಿ ಈ ಕೆಳಕಂಡ ನಿಬಂಧನೆ ಹಾಗೂ ಷರತ್ತಿನ ಮೇರೆಗೆ ನೋಂದಾಯಿಸಿ ಅನುಮೋದಿಸಿದೆ.

1. ಈ ಪ್ರಮಾಣಪತ್ರದ ಸಿಂಧುತ್ವ ಶಿಕ್ಷಣ ಕಾಯ್ದೆ 1983 ರ ನಿಯಮ 6,3(5)(4)ಕ್ಕೆ ಒಳಪಟ್ಟಿರುತ್ತದೆ.
2. 1983 ರ ಶಿಕ್ಷಣ ಕಾಯ್ದೆ ನಿಯಮ 4 ಮತ್ತು 5 ಗಳನ್ನು ಆಡಳಿತ ಸಂಸ್ಥೆ / ಟ್ರಸ್ಟ್ ಕಡ್ಡಾಯವಾಗಿ ಪಾಲಿಸತಕ್ಕದ್ದು.
3. ಶಾಲೆಗೆ ಅಗತ್ಯವಿರುವ ನಿವೇಶನ, ಕಟ್ಟಡ, ಪೀಠೋಪಕರಣ, ಪಾಠೋಪಕರಣ, ತರಬೇತಿ ಪಡೆದ ಶಿಕ್ಷಕರು, ಸೂಕ್ತ ಹಣಕಾಸಿನ ವ್ಯವಸ್ಥೆ ಮಾಡತಕ್ಕದ್ದು ಮತ್ತು ಪಾಲಿಸತಕ್ಕದ್ದು.
4. ಈ ಶಾಲೆಗೆ ಸರ್ಕಾರದಿಂದ ಯಾವುದೇ ರೀತಿಯ ಧನಸಹಾಯ ಅಪೇಕ್ಷಿಸಲು ಅವಕಾಶವಿರುವುದಿಲ್ಲ.
5. ಮಾನ್ಯತೆ ಪ್ರಸ್ತಾವನೆಯನ್ನು ಒಂದು ವರ್ಷದೊಳಗೆ ಸಲ್ಲಿಸತಕ್ಕದ್ದು.
6. ಶಾಲೆಯಲ್ಲಿ ನೇಮಕವಾದ ಸಿಬ್ಬಂದಿಯವರ ಸೇವಾ ಪುಸ್ತಕಗಳನ್ನು ತೆರೆದು ಪರಿಶೀಲನೆಗಾಗಿ ಸಲ್ಲಿಸುವುದು.
7. ಶಾಲಾ ಕಟ್ಟಡ ಮತ್ತು ಆವರಣದಲ್ಲಿ ಬೆಂಕಿ ಅಪಘಾತ ಮತ್ತು ಇತರ ಅಪಘಾತಗಳಿಂದ ತೊಂದರೆ ಯಾಗದಂತೆ ಸೂಕ್ತ ಕ್ರಮ ಕೈಗೊಂಡಿರಬೇಕು.
8. ಅನುಮತಿಸಿದ ಶೈಕ್ಷಣಿಕ ವರ್ಷದಲ್ಲಿ ಶಾಲೆ ಪ್ರಾರಂಭಿಸದಿದ್ದಲ್ಲಿ ಈ ನೊಂದಣಿ ಪತ್ರ ತಂತಾನೆ ರದ್ದಾಗುತ್ತದೆ.

ಕ್ಷೇತ್ರ ಶಿಕ್ಷಣಾಧಿಕಾರಿಗಳು
ಬೆಂಗಳೂರು ದಕ್ಷಿಣ ವಲಯ-1

ಕಾರ್ಯದರ್ಶಿಗಳು, ಭೀಮಚಂದ್ರ ಎಜುಕೇಷನಲ್ ಟ್ರಸ್ಟ್, ನಂ.212, 38ನೇ ಕ್ರಾಸ್, 8ನೇ ಬ್ಲಾಕ್, ಜಯನಗರ
ಬೆಂಗಳೂರು-560082

For Bheemchandra Educational Trust
Secretary

English medium

ಬೆಂಗಳೂರು ನಗರ ಜಿಲ್ಲಾ ಪಂಚಾಯತ್,

ಉಪ ನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ದಕ್ಷಿಣ ಜಿಲ್ಲೆ, ಕಲಾಸಿಪಾಳ್ಯಂ,

ಬೆಂಗಳೂರು-560002.

ಸಂಖ್ಯೆ:ಅನು1.ಮಾ.ಪ.ಅ/190/2017-18 ದಿನಾಂಕ:16-01-2018

**ಜ್ಞಾಪನಾ**

ವಿಷಯ: ಘನ ಸರ್ವೋಚ್ಚ ನ್ಯಾಯಾಲಯದ ಹಾಗೂ ರಾಜ್ಯ ಉಚ್ಚ ನ್ಯಾಯಾಲಯದ ತೀರ್ಪಿನ ಅನ್ವಯ ಖಾಸಗಿ ಅನುದಾನ ರಹಿತ ಕನ್ನಡ ಮಾಧ್ಯಮ ಅಥವಾ ಮಾತೃ ಭಾಷೆಯಲ್ಲಿ ಅನುಮತಿ ಪಡೆದು ಪ್ರಸ್ತುತ ಆಂಗ್ಲ ಮಾಧ್ಯಮಕ್ಕೆ ಪರಿವರ್ತನೆಕ್ಕೆ ಕೋರಿದ್ದ ಪ್ರಕರಣಗಳಲ್ಲಿ 2017-18ನೇ ಸಾಲಿನಿಂದ 1-5 ನೇ ತರಗತಿ ಆಂಗ್ಲ ಮಾಧ್ಯಮಕ್ಕೆ ಅನುಮತಿ ನೀಡುವ ಬಗ್ಗೆ

ಉಲ್ಲೇಖ:1. ಮಾನ್ಯ ಸರ್ವೋಚ್ಚ ನ್ಯಾಯಾಲಯದಲ್ಲಿ ರಾಜ್ಯ ಸರ್ಕಾರವು ಸಲ್ಲಿಸಿದ ಎಸ್.ಎಲ್.ಪಿ. 18139-18163/2008ನ್ನು ಸಿವಿಲ್ ಅಪೀಲ್ ಎಂದು ಪರಿಗಣಿಸಿ ಸಂವಿಧಾನ ಪೀಠಕ್ಕೆ ವರ್ಗಾವಣೆಗೊಂಡ ತರುವಾಯದಲ್ಲಿ ದಿನಾಂಕ 6-5-201ರಲ್ಲಿ ಹೊರಟಿರುವ ತೀರ್ಪು.

2. ದಿನಾಂಕ 6-5-2014ರ ತೀರ್ಪಿನ ಕುರಿತು ಸಲ್ಲಿಸಲಾಗಿದ್ದ ಮರು ಪರಿಶೀಲನಾ ಅರ್ಜಿ ಸಂಖ್ಯೆ: 1878-1911/2014ರಲ್ಲಿ ದಿನಾಂಕ 9-9-2014ರಂದು ವಜಾ ಆದೇಶ. ನಂತರ ನಂತರದಲ್ಲಿ ರಾಜ್ಯ ಸರ್ಕಾರ ದಾಖಲಿಸಿದ್ದ ಪರಿಹಾರಾತ್ಮಕ ಅರ್ಜಿ (curative Petition) ಆದೇಶ.

3. ಸರ್ಕಾರದ ಅರೆ ಸರ್ಕಾರಿ ಪತ್ರ ಸಂಖ್ಯೆ ಇಡಿ 263 ಪಿಜಿಸಿ 2015 ದಿನಾಂಕ 2-6-2015.

4. ಆಯುಕ್ತರು, ಸಾಶಿಇ, ಬೆಂಗಳೂರು ರವರ ಏಕ ಕಡತ ಸಂಖ್ಯೆ ಸಿ7(3) ಪ್ರಾಶಿಅ/ಭಾಷಾ ನೀತಿ /19/2014-15 ದಿನಾಂಕ 6-6-2015.

5. ಸರ್ಕಾರದ ಸುತ್ತೋಲೆ ಸಂಖ್ಯೆ:ಇಡಿ.359 ಪಿಜಿಸಿ 2015. ದಿನಾಂಕ 5-9-2015 & ಇಡಿ.617.ಪಿಜಿಸಿ.2015, ದಿ:23-12-2015

6. ನಿರ್ದೇಶಕರು (ಪ್ರಾಥಮಿಕ) ಆಯುಕ್ತರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ನೃಪತುಂಗ ರಸ್ತೆ, ಬೆಂಗಳೂರು ರವರ ಪತ್ರ ಸಂಖ್ಯೆ:ಸಿ7(3)ಪ್ರಾಶಿಅ/1-5.ಆಂ.ಮಾ.ಪ.01/2016-17, ದಿನಾಂಕ:18-07-2015.

7. ಕ್ಷೇತ್ರ ಶಿಕ್ಷಣಾಧಿಕಾರಿಗಳು, ದಕ್ಷಿಣ ವಲಯ-1 ರವರ ಪತ್ರ ಸಂಖ್ಯೆ:ಅ6.ಆಂ.ಮಾ.ಪ.42/17-18 ದಿನಾಂಕ:10-01-2018.

----------

1994-95ರಲ್ಲಿ ಜಾರಿಗೊಳಿಸಲಾದ ಭಾಷಾ ಕುರಿತಂತೆ ಹಲವು ಸಂಸ್ಥೆಗಳು ಮೊದಲಿಗೆ ರಾಜ್ಯ ಉಚ್ಚ ನ್ಯಾಯಾಲಯದಲ್ಲಿ ಪ್ರಕರಣವನ್ನು ದಾಖಲಿಸಿದ್ದ ರಿಟ್ ಅರ್ಜಿಯಲ್ಲಿ 2008ರಲ್ಲಿ ತೀರ್ಪು ಹೊರಬಿದ್ದು ನಂತರ ಸರ್ಕಾರವು ಘನ ಸರ್ವೋಚ್ಚ ನ್ಯಾಯಾಲಯದಲ್ಲಿ ವಿಶೇಷ ರಜಾ ಅರ್ಜಿಯನ್ನು ದಾಖಲಿಸಿ ಅಂತಿಮವಾಗಿ ದಿನಾಂಕ 6-5-2014ರಲ್ಲಿ ಘನ ಸರ್ವೋಚ್ಚ ನ್ಯಾಯಾಲಯದ ಸಂವಿಧಾನ ಪೀಠವು ತೀರ್ಪು ನೀಡಿದ ಮತ್ತು ಕರ್ನಾಟಕ ಉಚ್ಚ ನ್ಯಾಯಾಲಯ ಕೆಲವು ಪ್ರಕರಣಗಳಲ್ಲಿ ನಿಂದನಾ ದಾವೆಯು ಸೇರಿದಂತೆ ಸರ್ವೋಚ್ಚ ನ್ಯಾಯಾಲಯದ ಅನುಷ್ಠಾನಗೊಳಿಸುವಂತೆ ಆದೇಶಿಸಿದ ಹಿನ್ನಲೆಯಲ್ಲಿ 01 ರಿಂದ 5ನೇ ತರಗತಿಗೆ ಆಂಗ್ಲ ಮಾಧ್ಯಮ ಪರಿವರ್ತನೆಗೆ ಸರ್ಕಾರವು ಉಲ್ಲೇಖ-3, 4 ಮತ್ತು 5 ರಲ್ಲಿ ಅನುಮತಿ ನೀಡುರುತ್ತದೆ.

ಉಲ್ಲೇಖ(7)ರಲ್ಲಿ ಸಲ್ಲಿಕೆಯಾಗಿರುವ ಶಾಲೆಗೆ 01 ರಿಂದ 5ನೇ ತರಗತಿಯವರೆಗೆ ಶಾಲೆಯು ಪ್ರಾರಂಭವಾದ ಸಾಲಿನಿಂದ ನಿರಂತರವಾಗಿ ನಡೆಯುತ್ತಿದ್ದು, ಕನ್ನಡ ಮಾಧ್ಯಮದಿಂದ ಆಂಗ್ಲ ಮಾಧ್ಯಮಕ್ಕೆ ಪರಿವರ್ತನೆಯನ್ನು ನೀಡಲು ಉಲ್ಲೇಖದಲ್ಲಿನ (5) ಮತ್ತು (6)ರ ಸರ್ಕಾರದ ಆದೇಶಗಳಂತೆ ಈ ಕೆಳಕಂಡ ಶಾಲೆಗೆ 2017-18ನೇ ಶೈಕ್ಷಣಿಕ ಸಾಲಿನಿಂದ 1 ಮತ್ತು 5ನೇ ತರಗತಿಗಳಲ್ಲಿ ಆಂಗ್ಲ ಮಾಧ್ಯಮದಲ್ಲಿ ಬೋಧಿಸಲು ಕೆಳಗಿನ ಷರತ್ತುಗೊಳಪಟ್ಟು ಅನುಮತಿ ನೀಡಬಹುದಾಗಿದೆ ಎಂಬ ಶಿಫಾರಸ್ಸಿನಂತೆ ಅನುಮತಿ ನೀಡಿದೆ.

1) ಎಲ್ಲಾ ಸಂಸ್ಥೆಗಳಿಂದ ಕರ್ನಾಟಕ ಶಿಕ್ಷಣ ಕಾಯ್ದೆ ನಿಯಮಗಳ ಅನ್ವಯ ನಮೂನೆ-3ರಲ್ಲಿ ಅಗತ್ಯ ವಿವರಗಳನ್ನು ನಮೂದಿಸಿ 1-5 ನೇ ತರಗತಿ ಕನ್ನಡ ಮಾಧ್ಯಮದ ತರಗತಿಗಳನ್ನು ನಡೆಸಲು ವಿತರಿಸಲಾಗಿದ್ದ ಮೂಲ ನೋಂದಣಿ ಪತ್ರವನ್ನು ಕ್ಷೇತ್ರ ಶಿಕ್ಷಣಾಧಿಕಾರಿಗಳು 15 ದಿವಸಗಳೊಳಗೆ ಪಡೆದು ಸಲ್ಲಿಸದ ನಂತರದಲ್ಲಿ ನಮೂನೆ-4ರಲ್ಲಿ ಆಂಗ್ಲ ಮಾಧ್ಯಮಕ್ಕೆ ಪರಿಷ್ಕೃತ ನೋಂದಣಿ ಪ್ರಮಾಣ ಪತ್ರವನ್ನು ವಿತರಿಸಲಾಗುವುದು.

2) ಕ್ಷೇತ್ರ ಶಿಕ್ಷಣಾಧಿಕಾರಿಗಳು ಶಿಫಾರಸ್ಸು ಮಾಡಿ ದೃಢೀಕರಿಸಿ ಸಲ್ಲಿಸಿರುವ ವರದಿ ಮತ್ತು ದಾಖಲೆಗಳ ಆಧಾರದಲ್ಲಿ ಮೇಲ ಅನುಮತಿಯನ್ನು ನೀಡಲಾಗಿದೆ.

For Bheemchandra Educational Trust

Secretary

ಬೆಂಗಳೂರು ನಗರ ಜಿಲ್ಲಾ ಪಂಚಾಯತ್.

ಉಪ ನಿರ್ದೇಶಕರ ಕಛೇರಿ. ಸಾರ್ವಜನಿಕ ಶಿಕ್ಷಣ ಇಲಾಖೆ. ಬೆಂಗಳೂರು ದಕ್ಷಿಣ ಜಿಲ್ಲೆ. ಕಲಾಸಿಪಾಳ್ಯಂ.

ಬೆಂಗಳೂರು-560 002.

ಸಂಖ್ಯೆ:ಅನು1.ಮಾ.ವ.ಅ.190/2017-18 ದಿನಾಂಕ:16-01-2018

ನಮೂನೆ-4

(ನಿಯಮ-7ರ ಉಪ ನಿಯಮ-3 ರಂತೆ)

ಪರಿಷ್ಕರಿಸಲ್ಪಟ್ಟ ನೋಂದಣಿ ಪ್ರಮಾಣ ಪತ್ರ

ಪ್ರಮಾಣ ಪತ್ರ ಸಂಖ್ಯೆ:140/2017-18

ಭೀಮಚಂದ್ರ ಎಜುಕೇಷನಲ್ ಟ್ರಸ್ಟ್. ನಂ.212. 38ನೇ ಕ್ರಾಸ್. 8ನೇ ಬ್ಲಾಕ್. ಬೆಂಗಳೂರು ಈ ಸಂಸ್ಥೆಯು ಕೆಳಕಂಡ ಶಾಲೆಯನ್ನು ನಡೆಸಲು ನೋಂದಾಯಿಸಲ್ಪಟ್ಟಿದೆ.

| ಕ್ರಮ ಸಂಖ್ಯೆ | ಶಾಲೆಯ ಹೆಸರು ಮತ್ತು ವಿಳಾಸ | ಅನುಮತಿ ನೀಡಿದ ತರಗತಿ | ಪ್ರಾರಂಭಿಸಿದ ವರ್ಷ | ಅನುಮತಿ ನೀಡಿದ ಮಾಧ್ಯಮ | ಷರಾ |
|---|---|---|---|---|---|
| 1) | ಹಿಲ್ ಸೈಡ್ ಇಂಟರ್‌ನ್ಯಾಷನಲ್ ಪಬ್ಲಿಕ್ ಸ್ಕೂಲ್. ಸರ್ವೆ ನಂ.24/4. ಗುಬ್ಬಲಾಳಗ್ರಾಮ. ಉತ್ತರಹಳ್ಳಿ ಹೋಬಳಿ. ಬೆಂಗಳೂರು ದಕ್ಷಿಣ ತಾಲ್ಲೂಕು. | 1 ರಿಂದ 5ನೇ ತರಗತಿ | 2005-2006 ನೇ ಸಾಲಿನಿಂದ | ಕನ್ನಡ ಮಾಧ್ಯಮ ಅನುದಾನರಹಿತ | -- |

ಮೇಲಿನ ಆಡಳಿತ ಮಂಡಳಿಯು ಕರ್ನಾಟಕ ಶಿಕ್ಷಣ ಕಾಯಿದೆ-1983ರ (1995ರ ಕರ್ನಾಟಕ ಕಾಯಿದೆ-1) ಸೆಕ್ಷನ್-3ರ ಉಪ ನಿಯಮ(5)ರಲ್ಲಿನ ಅವಕಾಶಗಳಂತೆ ಈ ಮೊದಲು ನೋಂದಣಿ ಮಾಡಿದ ಶಾಲೆಯ ವಿವರಗಳಲ್ಲಿ ಬದಲಾವಣೆಗಳಾಗಿರುವುದನ್ನು ವರದಿ ಮಾಡಿ. ಮೂಲ ನೋಂದಣಿ ಪ್ರಮಾಣ ಪತ್ರವನ್ನು ಪರಿಷ್ಕರಿಸುವಂತೆ ಕೋರಿ ನಮೂನೆ-3ರಲ್ಲಿ ಅರ್ಜಿಯನ್ನು ಸಲ್ಲಿಸಿರುತ್ತಾರೆ.

ಪ್ರಯುಕ್ತ ಕ್ಷೇತ್ರ ಶಿಕ್ಷಣಾಧಿಕಾರಿಗಳು, ದಕ್ಷಿಣ ವಲಯ-1 ರವರ ನಮೂನೆ-2 ಪ್ರಮಾಣ ಪತ್ರ ಸಂಖ್ಯೆ:54. ದಿನಾಂಕ:29-06-2015 (ಸಂಖ್ಯೆ:ಅ6.ಖಾ.ಕ.ಪ್ರಾ.ಶಾ.ನೋಂ/07/2005-06) ರ ಅನುಮತಿ ಪತ್ರವನ್ನು ಹಿಂಪಡೆದಿದೆ ಹಾಗೂ ರದ್ದುಪಡಿಸಿದೆ ಹಾಗೂ ಅಗತ್ಯ ನಮೂದುಗಳನ್ನು ಮಾಡುವಂತೆ ತಿಳಿಸಿದೆ.

ಹಾಗೂ ಇದೀಗ ಪರಿಷ್ಕೃತ ನೋಂದಣಿ ಪ್ರಮಾಣ ಪತ್ರವನ್ನು ಭೀಮಚಂದ್ರ ಎಜುಕೇಷನಲ್ ಟ್ರಸ್ಟ್. ನಂ.212. 38ನೇ ಕ್ರಾಸ್. 8ನೇ ಬ್ಲಾಕ್. ಬೆಂಗಳೂರು ಇವರ ಹೆಸರಿಗೆ ಕೆಳಕಂಡಂತೆ ಪರಿಷ್ಕೃತ ವಿವರಗಳನ್ನು ನಮೂದಿಸಿ ವಿತರಿಸಲಾಗಿದೆ.

| ಕ್ರಮ ಸಂಖ್ಯೆ | ಶಾಲೆಯ ಹೆಸರು ಮತ್ತು ವಿಳಾಸ | ಅನುಮತಿ ನೀಡಿದ ತರಗತಿ | ಶೈಕ್ಷಣಿಕ ವರ್ಷ | ಅನುಮತಿ ನೀಡಿರುವ ಮಾಧ್ಯಮ | ಷರಾ |
|---|---|---|---|---|---|
| 1) | ಹಿಲ್ ಸೈಡ್ ಇಂಟರ್‌ನ್ಯಾಷನಲ್ ಪಬ್ಲಿಕ್ ಸ್ಕೂಲ್. ಸರ್ವೆ ನಂ.24/4. ಗುಬ್ಬಲಾಳಗ್ರಾಮ. ಉತ್ತರಹಳ್ಳಿ ಹೋಬಳಿ. ಬೆಂಗಳೂರು ದಕ್ಷಿಣ ತಾಲ್ಲೂಕು. | 1 ರಿಂದ 5ನೇ ತರಗತಿ | 2017-2018 ನೇ ಸಾಲಿನಿಂದ | ಆಂಗ್ಲ ಮಾಧ್ಯಮ (ಶಾಶ್ವತ ಅನುದಾನರಹಿತವಾಗಿ) | -- |

ಈ ಹಿಂದಿನ ಪ್ಯಾರಾಗಳಲ್ಲಿ ಉಲ್ಲೇಖಿಸಿರುವ ಆಡಳಿತ ಮಂಡಳಿಯ ವಿವರಗಳನ್ನು ಶಿಕ್ಷಣ ಸಂಸ್ಥೆಗಳ ಪರಿಷ್ಕೃತ ನೋಂದಣಿ ಪ್ರಮಾಣ ಪತ್ರವನ್ನು ವಿತರಿಸಲು ನೋಂದಣಿ ವಹಿಯ 01 ನೇ ವಾಲ್ಯೂಂನ ಪುಟ ಸಂಖ್ಯೆ 164 & 165 ರ ಕ್ರಮ ಸಂಖ್ಯೆ:140/2017-18 ರಲ್ಲಿ ನೋಂದಾಯಿಸಲಾಗಿದೆ.

ಈ ನೋಂದಣಿ ಪ್ರಮಾಣ ಪತ್ರವನ್ನು ದಿನಾಂಕ ದಿನಾಂಕ:16-01-2018 (ಹದಿನಾರನೇ-ಜನವರಿ-ಎರಡು ಸಾವಿರದ ಹದಿನೆಂಟು)ರಂದು ವಿತರಿಸಲಾಗಿದೆ. ನೋಂದಣಿಯು ಕರ್ನಾಟಕ ಶಿಕ್ಷಣ ಕಾಯ್ದೆ ನಿಯಮಗಳು ಹಾಗೂ ಕಾಲದಿಂದ ಕಾಲಕ್ಕೆ ಹೊರಡಿಸಲಾಗುವ ಇಲಾಖಾ ನಿಯಮಗಳಿಗೆ ಒಳಪಟ್ಟಿದೆ.

(ಬಿ.ಹೆಚ್.ಅಶ್ವತ್ಥನಾರಾಯಣ[illegible])

ಉಪ ನಿರ್ದೇಶಕರು(ಆಡಳಿತ)

ಬೆಂಗಳೂರು ದಕ್ಷಿಣ ಜಿಲ್ಲೆ

ಸ್ಥಳ: ಬೆಂಗಳೂರು

ದಿನಾಂಕ:16-01-2018

ಪ್ರತಿಯನ್ನು:

1. ಕ್ಷೇತ್ರ ಶಿಕ್ಷಣಾಧಿಕಾರಿಗಳು. ಸಾರ್ವಜನಿಕ ಶಿಕ್ಷಣ ಇಲಾಖೆ. ದಕ್ಷಿಣ ವಲಯ-1, ಬೆಂಗಳೂರು.
2. ಕಾರ್ಯದರ್ಶಿಗಳು. ಭೀಮಚಂದ್ರ ಎಜುಕೇಷನಲ್ ಟ್ರಸ್ಟ್. ನಂ.212. 38ನೇ ಕ್ರಾಸ್. 8ನೇ ಬ್ಲಾಕ್. ಬೆಂಗಳೂರು
3. ಕಛೇರಿ ಪ್ರತಿ

For Bheemchandra Educational Trust

Secretary

ಕರ್ನಾಟಕ ಸರ್ಕಾರ

R.R

# ಕ್ಷೇತ್ರ ಶಿಕ್ಷಣಾಧಿಕಾರಿಗಳ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ,

## ಬೆಂಗಳೂರು ದಕ್ಷಿಣ ವಲಯ-1, ಶಂಕರಪುರಂ, ಬೆಂಗಳೂರು-560-004.

## ನಮೂನೆ-3

## (1999ರ ಮಾನ್ಯತೆ ನಿಯಮ 4ರಂತೆ)

ಸಂಖ್ಯೆ : ಆರ ಪ್ರಾ.ಶಾ.ಮಾ.ನ 162/2017-18 — ದಿನಾಂಕ: 27.01.2018

ಭೀಮಸಂದ್ರ ಎಜುಕೇಷನಲ್ ಟ್ರಸ್ಟ್, ನಂ.212, 38ನೇ ಕ್ರಾಸ್, 8ನೇ ಬ್ಲಾಕ್, ಬೆಂಗಳೂರು ಈ ಸಂಸ್ಥೆಯು ವತಿಯಿಂದ ನಡೆಯುತ್ತಿರುವ ಹಿಲ್ ಸೈಡ್ ಇಂಟರ್‌ನ್ಯಾಷನಲ್ ಪಬ್ಲಿಕ್ ಸ್ಕೂಲ್, ನಂ.24/4, ಗುಬ್ಬಲಾಳ ಗ್ರಾಮ, ಉತ್ತರಹಳ್ಳಿ ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು ಈ ಶಾಲೆ ಕರ್ನಾಟಕ ಶಿಕ್ಷಣ ಕಾಯ್ದೆ 1983 (ಕರ್ನಾಟಕ ಆಕ್ಟ್-1-1995) ಸೆಕ್ಷನ್ 36(6)ರಂತೆ ಈ ಕೆಳಕಂಡ ಷರತ್ತುಗಳ ಮೇಲೆ ಶಾಶ್ವತ ಅನುದಾನರಹಿತವಾ ತಾತ್ಕಾಲಿಕವಾಗಿ ಮಾನ್ಯತೆ ನೀಡಿದೆ ಎಂದು ಪ್ರಮಾಣೀಕರಿಸಲಾಗಿದೆ.

| | | |
|---|---|---|
| 1. | ಶಾಲೆಯ ಹೆಸರು-ವಿಳಾಸ | ಹಿಲ್ ಸೈಡ್ ಇಂಟರ್‌ನ್ಯಾಷನಲ್ ಪಬ್ಲಿಕ್ ಸ್ಕೂಲ್, ನಂ.24/4, ಗುಬ್ಬಲಾಳ ಗ್ರಾಮ, ಉತ್ತರಹಳ್ಳಿ **ಹೋಬಳಿ, ಬೆಂಗಳೂರು ದಕ್ಷಿಣ ತಾಲ್ಲೂಕು** |
| 2. | ಮಾನ್ಯತೆ ನೀಡಿರುವ ಮಾಧ್ಯಮ | ಆಂಗ್ಲ ಮಾಧ್ಯಮ |
| 3. | ಶಾಲೆ ಅನುದಾನ ಸಹಿತವೇ/ರಹಿತವೇ | ಶಾಶ್ವತ ಅನುದಾನರಹಿತವಾಗಿ |
| 4. | ಮಾನ್ಯತೆ ನೀಡಿದ ತರಗತಿಗಳು | 1 ರಿಂದ 5 ನೇ ತರಗತಿ |
| 5. | ಮಾನ್ಯತೆ ನೀಡಿದ ವರ್ಷ | **1 ರಿಂದ 5ನೇ ತರಗತಿ ಆಂಗ್ಲ ಮಾಧ್ಯಮ 2017-18 ರಿಂದ 2021-2022ರವರೆಗೆ ಮಾನ್ಯತೆ** |
| 6. | ಭೇಟಿ ನೀಡಿದ ಅಧಿಕಾರಿಗಳು | ಶ್ರೀ.ಟಿ.ಎನ್.ಮೋಹನ್‌ರಾಜೇ ಅರಸ್, ತಾಲ್ಲೂಕು ದೈಹಿಕ ಶಿಕ್ಷಣ ಪರಿವೀಕ್ಷಕರು, ಬೆಂಗಳೂರು ದಕ್ಷಿಣ ವಲಯ-1 |

**ಈ ಪ್ರಮಾಣ ಪತ್ರವನ್ನು ಈ ಕೆಳಕಂಡ ಷರತ್ತುಗೊಳಪಟ್ಟು ನೀಡಿದೆ**

1. ಶಿಕ್ಷಣ ಕಾಯ್ದೆಯ ಎಲ್ಲಾ ನಿಯಮಗಳನ್ನು ಹಾಗೂ ಸರ್ಕಾರದ ಇಲಾಖೆ ಆದೇಶಗಳನ್ನು ಕಟ್ಟುನಿಟ್ಟಾಗಿ ಪಾಲಿಸಬೇಕು.
2. ಸರ್ಕಾರಿ ಆದೇಶಗಳ ಪ್ರಕಾರ ನಿಗಧಿಪಡಿಸಿರುವ ಅರ್ಹ ವಿದ್ಯಾರ್ಹತೆ ಹೊಂದಿರುವ ಶಿಕ್ಷಕರನ್ನು ಮಾತ್ರ ನೇಮಕಮಾಡಿಕೊಳ್ಳಬೇಕು.
3. ಶಿಕ್ಷಣ ಕಾಯ್ದೆಯನ್ವಯ ವಿದ್ಯಾರ್ಥಿಗಳ ಸಂಖ್ಯೆ ಇರಬೇಕು.
4. ಶಾಲೆ ನಡೆಸಲು ಅಗತ್ಯವಾದ ಸ್ಥಳಾವಕಾಶ, ಪಾಠೋಪಕರಣ, ಹಾಗೂ ಆಟದ ಮೈದಾನ ಇವುಗಳನ್ನು ಒದಗಿಸಬೇಕು.
5. ಇಲಾಖಾ ನಿಯಮದಂತೆ ಮಾತ್ರ ಶುಲ್ಕ ವಸೂಲಿ ಮಾಡುವುದು ಮತ್ತು ಇದರ ಲೆಕ್ಕಪತ್ರಗಳನ್ನು ನಿರ್ವಹಿಸಿ ಶಾಲಾ ತನಿಖಾ ಸಮಯದಲ್ಲಿ ಹಾಜರಿಪಡಿಸಬೇಕು.
6. ಇಲಾಖೆಯ ಪೂರ್ವಾನುಮತಿ ಪಡೆಯದೇ ಹೆಚ್ಚಿನ ತರಗತಿ/ವಿಭಾಗಗಳನ್ನು ತೆರೆಯಕೂಡದು
7. ಹಿಂದಿನ ಸಾಲಿನವರೆಗೆ ಲೆಕ್ಕ ಪತ್ರಗಳನ್ನು ನೋಂದಣಾಧಿಕಾರಿಗಳಿಗೆ ಸಲ್ಲಿಸಿ ಸ್ವೀಕೃತಿ ಪ್ರತಿ ಪಡೆದು ಸಲ್ಲಿಸಬೇಕು.
8. ಇಲಾಖೆಯು ನಿಗಧಿಪಡಿಸಿರುವ ಪಠ್ಯಪುಸ್ತಕಗಳನ್ನು ಅನುಸರಿಸಬೇಕು/ಬೋಧಿಸಬೇಕು.
9. ಸ್ಥಿರನಿಧಿಯನ್ನು ನಿಯಮಾನುಸಾರ ಜಂಟಿಖಾತೆಯಲ್ಲಿ ಇಟ್ಟಿರಬೇಕು.
10. ನಿಯಮಾನುಸಾರ ಸಂಬಂಧಪಟ್ಟ ಪ್ರಾಧಿಕಾರಕ್ಕೆ ಆಡಿಟ್ ರಿಪೋರ್ಟ್ ಸಲ್ಲಿಸಿ ಅನುಮೋದನೆ ಪಡೆದಿರಬೇಕು.
11. ಕರ್ನಾಟಕ ಶಿಕ್ಷಣ ಕಾಯ್ದೆ ನಿಯಮದಲ್ಲಿ ವಿಧಿಸಿರುವ ಎಲ್ಲಾ ಮಾನ್ಯತೆ ನಿಯಮಗಳನ್ನು ಪಾಲಿಸತಕ್ಕದ್ದು. ತಪ್ಪಿದ್ದಲ್ಲಿ ನಿಯಮಾನುಸಾರ ಮಾನ್ಯತೆಯನ್ನು ಹಿಂತೆಗೆದುಕೊಳ್ಳಲಾಗುವುದು.
12. ಶಾಲೆಯಲ್ಲಿನ ಎಲ್ಲಾ ಶಿಕ್ಷಕರ ಮತ್ತು ಸಿಬ್ಬಂದಿ ವರ್ಗದವರ ಸೇವಾಪುಸ್ತಕಗಳನ್ನು ತೆರೆದು ಕ್ರಮಬದ್ಧವಾಗಿ ನಿರ್ವಹಿಸುವುದು.
13. ಶಾಲಾ ಕಟ್ಟಡ ಮತ್ತು ಆವರಣದಲ್ಲಿ ಬೆಂಕಿ ಅಪಘಾತ ಮತ್ತು ಇತರೆ ಅವಘಡಗಳಿಂದ ತೊಂದರೆಯಾಗದಂತೆ ಸೂಕ್ತ ಕ್ರಮಕೈಗೊಂಡಿರಬೇಕು.
14. ಸರ್ಕಾರಿ ಸುತ್ತೋಲೆ ಸಂಖ್ಯೆ ಇಡಿ 151 ಎಸ್.ಇ.ಪಿ 2008 ದಿನಾಂಕ:21.07.2008ರನ್ವಯ ಶಾಲೆಯಲ್ಲಿ ನೇಮಕಗೊಂಡ ಸಿಬ್ಬಂದಿಯವರಿಗೆ ನಿಯಮಾನುಸಾರ ಕನಿಷ್ಠ ವೇತನ ಬ್ಯಾಂಕ್ ಮುಖಾಂತರ ಪಾವತಿಸಬೇಕು.
15. ಮಕ್ಕಳ ಸುರಕ್ಷತೆ ಹಾಗೂ ಭದ್ರತೆ ಬಗ್ಗೆ ಶಿಕ್ಷಣ ಇಲಾಖೆ/ಪೋಲೀಸ್ ಇಲಾಖೆ ನಿಗಧಿ ಪಡಿಸಿರುವಂತೆ ಸೂಕ್ತ ಕ್ರಮಕೈಗೊಳ್ಳುವುದು.
16. ಶಿಕ್ಷಣ ಹಕ್ಕು ಕಾಯ್ದೆ 2009ರ ಸೆಕ್ಷನ್ 19ರಂತೆ ಕಟ್ಟಡ ಹಾಗೂ ಮೂಲಭೂತ ಸೌಕರ್ಯಗಳನ್ನು ಕಡ್ಡಾಯವಾಗಿ ಒದಗಿಸತಕ್ಕದ್ದು ವಿಫಲರಾದಲ್ಲಿ ನಿಮಗೆ ನೀಡಿರುವ ಮಾನ್ಯತೆಯನ್ನು ಹಿಂಪಡೆಯುವ ಬಗ್ಗೆ ಸೂಕ್ತ ಕ್ರಮಕೈಗೊಳ್ಳಲಾಗುವುದು.

(ಎನ್.ವೆಂಕಟೇಶ್)
ಕ್ಷೇತ್ರ ಶಿಕ್ಷಣಾಧಿಕಾರಿಗಳು
ಬೆಂಗಳೂರು ದಕ್ಷಿಣ ವಲಯ-1

1. ಕಾರ್ಯದರ್ಶಿಗಳು, ಭೀಮಸಂದ್ರ ಎಜುಕೇಷನಲ್ ಟ್ರಸ್ಟ್, ನಂ.212, 38ನೇ ಕ್ರಾಸ್, 8ನೇ ಬ್ಲಾಕ್, ಬೆಂಗಳೂರು
2. ಕಛೇರಿ ಪ್ರತಿ.

For Bheemchandra Educational Trust
Secretary

For Bheemchandra Educational
Secretary

Upgration

ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆ,

ಉಪನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಾಸಿಪಾಳ್ಯ, ಬೆಂಗಳೂರು ದಕ್ಷಿಣ ಜಿಲ್ಲೆ, ಬೆ

**ಮಂಜೂರಾತಿ ನೀಡಿದ ಕಛೇರಿ ವಿಳಾಸ:**

ಉಪನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಾಸಿಪಾಳ್ಯ, ಬೆಂಗಳೂರು ದಕ್ಷಿಣ ಜಿಲ್ಲೆ, **ದಿನಾಂಕ: 14-Jun-2019**
ಬೆಂಗಳೂರು-560002.

[ನಿಯಮ 3 ಉಪನಿಯಮ 5(ಬಿ)]

ಪ್ರಮಾಣ ಪತ್ರ ಸಂಖ್ಯೆ: 14424/2019-20

**HILLSIDE PUBLIC SCHOOL ( NO.9 RAGHUVANAHALLI, KANAKAPURA MAIN ROAD, BANAGALORE - 62 )**

ಅನು1.ಉ.ಹಿ.ಪ್ರಾ.ಶಾ.ನೋಂ.18/2019-2020

ಇವರ ಗೌವರ್ನಿಂಗ್ ಕೌನ್ಸಿಲ್ ಈ ಶಿಕ್ಷಣ ಸಂಸ್ಥೆಯ ಹೊಸ ಪ್ರಾಥಮಿಕ ಶಾಲೆಯನ್ನು ಕರ್ನಾಟಕ ಶಿಕ್ಷಣ ಕಾಯ್ದೆ 1983 [ಕರ್ನಾಟಕ ಆಕ್ಟ್ 1995] ಸೆಕ್ಷನ್ 31ರಂತೆ ಈ ಕೆಳಕಂಡ TO BE GIVE VALUE EDUCAION FOR THE MIDDLE CLASS PEOPLE OD THE SOCIETY... ಪ್ರಾರಂಭಿಸಲು ಮಂಜೂರಾತಿ ನೀಡಿ ನೊಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಲಾಗಿದೆ.

1. ಅರ್ಜಿ ಸಂಖ್ಯೆ : 190721
2. ಕ್ರಮ ಸಂಖ್ಯೆ : 14424
3. ಶಾಲೆಯ ಹೆಸರು ಮತ್ತು ವಿಳಾಸ : HILLSIDE PUBLIC SCHOOL ( NO.9 RAGHUVANAHALLI, KANAKAPURA MAIN ROAD, BANAGALORE - 62 )
4. ಅನುಮತಿ ನೀಡಿದ ತರಗತಿ : Upgradation from 6 to 8
5. ಶೈಕ್ಷಣಿಕ ವರ್ಷ : 2019-20
6 ಅನುಮತಿ ನೀಡಿದ ಮಾಧ್ಯಮ : English

ಸದರಿ ಶಿಕ್ಷಣ ಸಂಸ್ಥೆಯನ್ನು ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೋಂದಣಿ ವಹಿಯಲ್ಲಿ ನೊಂದಾಯಿಸಲಾಗಿದೆ. ಕ್ರಮ ಸಂಖ್ಯೆ / ಪುಟ ಸಂಖ್ಯೆ / ವಾಲ್ಯೂಂ ಸಂಖ್ಯೆ : 18/8/01

ಷರತ್ತುಗಳು

1. ಈ ನೋಂದಾವಣೆಯು ನಿಯಮ 3[5][4]ಕ್ಕೆ ಒಳಪಟ್ಟಿರುತ್ತದೆ.
2. ಗೌವರ್ನಿಂಗ್ ಕೌನ್ಸಿಲ್ ಇವರು ನಿಯಮ 4[4]ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.
3. ಶಾಲಾ ನಿವೇಶನ, ವಿಸ್ತೀರ್ಣ, ಕಟ್ಟಡ, ಪೀಠೋಪಕರಣಗಳು, ಸಿಬ್ಬಂದಿ ವರ್ಗ ಆರ್ಥಿಕ ಅನುಕೂಲತೆಗಳು ಮುಂತಾದವುಗಳನ್ನು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ. ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
4. ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿ ನಡೆಸತಕ್ಕದ್ದು.
5. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸುವ ಎಲ್ಲಾ ಸರ್ಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ 1983 [ಕರ್ನಾಟಕ ಆಕ್ಟ್ ಸಂಖ್ಯೆ:1:96] ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಅದರಡಿಯಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.

ಮುಂದುವರೆದಿದೆ...



For Bheemchandra Educational Trust

Secretary

6. ಈ ಪ್ರೌಢಶಾಲಾ ನೊಂದಾವಣಿಯಂತೆ ಸರ್ಕಾರಿ ಅಧಿಸೂಚನೆ ಸಂ: ಇಡಿ:175:ಪಿಎಂಸಿ:95, ದಿ:07-09-1998 ಮತ್ತು ದಿ:29-12-1998ರ ಪ್ರಕಾರ ಶಾಶ್ವತ ಅನುದಾನ ರಹಿತವಾಗಿರುತ್ತದೆ. ಆಡಳಿತ ಮಂಡಳಿಯು ಸರ್ಕಾರದಿಂದ ಯಾವುದೇ ಅನುದಾನವನ್ನು ಬಯಸುವುದಿಲ್ಲವೆಂದು ರೂ. 10-00 ಛಾಪಾ ಕಾಗದದಲ್ಲಿ ನೋಟರಿಯವರ ಮುಂದೆ ಪ್ರಮಾಣೀಕರಿಸಿದ ಒಪ್ಪಿಗೆ ಪತ್ರವನ್ನು ನೀಡುವುದು.

7. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳು [ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ, ಸೇವಾ ಷರತ್ತು ಮತ್ತು ನಿಬಂಧನೆಗಳು] ನಿಯಮ 1999ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.

8. ಇಲಾಖೆ ಹಾಗೂ ಸರ್ಕಾರ ನಿಗದಿಪಡಿಸಿದ ಪಠ್ಯಪುಸ್ತಕ, ಪರೀಕ್ಷಾ ಕ್ರಮಗಳನ್ನು ಮಾತ್ರ ತಪ್ಪದೇ ಅಳವಡಿಸತಕ್ಕದ್ದು.

9. ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಕನಿಷ್ಠ ಹಾಜರಾತಿ 25 ಇರತಕ್ಕದ್ದು.

10. ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ಮಾತ್ರ ನೇಮಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ ಅನುಚ್ಛೇದ 8ರ ಅಡಿಯಲ್ಲಿ ಉಪಬಂಧ 36-39ರಂತೆ ನೊಂದಾಯಿಸಿದ ಎಲ್ಲಾ ಶಾಲೆಗಳ ಮಾನ್ಯತೆ ಹಾಗೂ ತಾತ್ಕಾಲಿಕ ಮಾನ್ಯತೆ ವ್ಯಾಪ್ತಿಗೆ ಬರುವುದು.

11. ಪ್ರತಿ ವರ್ಷವೂ ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.

12. ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಜಿಲ್ಲಾ ಉಪನಿರ್ದೇಶಕರು ಹಾಗೂ ಆಡಳಿತ ಮಂಡಳಿಯ ಜಂಟಿ ಖಾತೆಯಲ್ಲಿ ಇರಿಸತಕ್ಕದ್ದು.

13. ಕರ್ನಾಟಕ ಶಿಕ್ಷಣ ಮಸೂದೆ ನಿಯಮಗಳ ಪ್ರಕಾರ ಶಾಲೆಗೆ ಬೇಕಾದ ಪೀಠೋಪಕರಣ, ಪಾಠೋಪಕರಣ, ಗ್ರಂಥಾಲಯ ಪುಸ್ತಕಗಳು, ಆಟದ ಮೈದಾನ, ಶಾಲಾ ಕಟ್ಟಡ ಮುಂತಾದ ಸೌಲಭ್ಯಗಳನ್ನು ಒಂದು ವರ್ಷದಲ್ಲಿ ಒದಗಿಸಿಕೊಳ್ಳತಕ್ಕದ್ದು. ಇಲ್ಲದಿದ್ದಲ್ಲಿ ನೋಂದಣಿಯನ್ನು ರದ್ದುಗೊಳಿಸಲಾಗುವುದು.

14. ಶಾಲೆ ತೆರೆದ ಬಗ್ಗೆ ಹಾಗೂ ವಿದ್ಯಾರ್ಥಿಗಳ ದಾಖಲಾತಿ ಮಾಹಿತಿಯನ್ನು ಶಾಲೆ ನೋಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭದ ಮೂರು ತಿಂಗಳ ಒಳಗಾಗಿ ಈ ಕಛೇರಿಗೆ ತಿಳಿಸಬೇಕು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತಾನಾಗೇ ರದ್ದಾಗುವುದು.

15. ಶಾಲೆಯಲ್ಲಿ ಹೆಣ್ಣು ಮಕ್ಕಳಿಗೆ ಮತ್ತು ಗಂಡು ಮಕ್ಕಳಿಗೆ ಪ್ರತ್ಯೇಕವಾದ ಶೌಚಾಲಯದ ವ್ಯವಸ್ಥೆಯನ್ನು ಕಡ್ಡಾಯವಾಗಿ ಒದಗಿಸಬೇಕು ಮತ್ತು ಶುದ್ಧ ಕುಡಿಯುವ ನೀರಿನ ವ್ಯವಸ್ಥೆಯನ್ನು ಒದಗಿಸಬೇಕು.

16. ಪ್ರಥಮ ಮಾನ್ಯತೆಗಾಗಿ ಉಪನಿರ್ದೇಶಕರಿಗೆ ಪ್ರಸ್ತಾವನೆ ಸಲ್ಲಿಸುವುದು. ಉಪನಿರ್ದೇಶಕರು ಶಿಕ್ಷಣ ಕಾಯ್ದೆ ಮತ್ತು ಸರ್ಕಾರದ ಆದೇಶ ದಿನಾಂಕ: 30-09-2007ರ ಅನುಬಂಧ-3ರ ಚೆಕ್ ಲಿಸ್ಟ್ ಮಾಹಿತಿ ಪಡೆದು ಈ ಆಧಾರದ ಮೇಲೆ ಶಾಲೆ ಪ್ರಾರಂಭಿಸಿದ ಮೂರು ತಿಂಗಳೊಳಗೆ ಕಡ್ಡಾಯವಾಗಿ ಪ್ರಥಮ ಮಾನ್ಯತೆ ನೀಡುವುದು. ನಿಗದಿತ ಅವಧಿಯೊಳಗೆ ಮಾನ್ಯತೆ ಪಡೆಯದಿದ್ದಲ್ಲಿ ನೋಂದಣಿ ತಂತಾನೆ ರದ್ದಾಗುತ್ತದೆ.

17. ಶಾಲೆಯ ಕಟ್ಟಡ ಸುರಕ್ಷತೆಯ ಬಗ್ಗೆ ಬೆಂಕಿ, ಬಿರುಗಾಳಿ, ವಿದ್ಯುತ್ ಆಘಾತ ಮುಂತಾದ ಅವಘಡಗಳಿಂದ ಸುರಕ್ಷಿತವಾಗಿರುವ ಬಗ್ಗೆ ಪರಿಶೀಲಿಸಿ ಖಚಿತಪಡಿಸಿಕೊಳ್ಳುವುದು. ಶಾಲಾ ಆವರಣದ 100 ಗಜಗಳ ಅಂತರದಲ್ಲಿ ತಂಬಾಕು ಉತ್ಪನ್ನಗಳ ಮಾರಾಟವನ್ನು ನಿಷೇಧಿಸಿದೆ ಎಂದು ಶಾಲಾ ಮುಂಭಾಗದಲ್ಲಿ ಪ್ರಕಟಣೆ ನೀಡುವುದು.

18. ಶಾಲಾ ಆಡಳಿತ ಮಂಡಳಿ ಯಾವುದೇ ತಪ್ಪು ಮಾಹಿತಿಗಳನ್ನು ನೀಡಿದ್ದಲ್ಲಿ ನೋಂದಣಿಯನ್ನು ರದ್ದುಪಡಿಸುವ ಅಧಿಕಾರ ಇಲಾಖೆ ಕಾಯ್ದಿರಿಸಿಕೊಂಡಿದೆ.

19. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 369 ಪಿ.ಜಿ.ಸಿ 2014, ದಿನಾಂಕ: 11.11.2014ರಂತೆ ಮತ್ತು ಈ ಕಛೇರಿ ಸುತ್ತೋಲೆ ದಿನಾಂಕ: 14.11.2014ರಂತೆ ಷರತ್ತುಗಳನ್ನು ಪಾಲಿಸಿರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.

20. ಸರ್ಕಾರದ ಅಧಿಸೂಚನೆ ಸಂಖ್ಯೆ: ಇಡಿ 709 ಪಿ.ಜಿ.ಸಿ 2017, ದಿನಾಂಕ: 07.03.2018ರಂತೆ ಮತ್ತು ಈ ಕಛೇರಿ ಸುತ್ತೋಲೆ ದಿನಾಂಕ: 26.03.2018ರಂತೆ ಷರತ್ತುಗಳನ್ನು ಪಾಲಿಸಿರುವುದನ್ನು ಖಚಿತಪಡಿಸಿಕೊಳ್ಳತಕ್ಕದ್ದು.

ಉಪನಿರ್ದೇಶಕರು,
ಸಾರ್ವಜನಿಕ ಶಿಕ್ಷಣ ಇಲಾಖೆ,
ಉಪನಿರ್ದೇಶಕರ ಕಛೇರಿ, ಸಾರ್ವಜನಿಕ ಶಿಕ್ಷಣ ಇಲಾಖೆ, ಕಲಾಸಿಪಾಳ್ಯ, ಬೆಂಗಳೂರು ದಕ್ಷಿಣ ಜಿಲ್ಲೆ, ಬೆ

1. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ ,
2. ಕಾರ್ಯದರ್ಶಿಗಳು, HILLSIDE PUBLIC SCHOOL (NO.9 RAGHUVANAHALLI, KANAKAPURA MAIN ROAD, BANAGALORE - 62) ದಕ್ಷಿಣ ವಲಯ-1
3. ಕಛೇರಿ ಪ್ರತಿ.

E
8-10

ಕರ್ನಾಟಕ ಸರ್ಕಾರದ ಸಾರ್ವಜನಿಕ ಶಿಕ್ಷಣ ಇಲಾಖೆಯ ಆಯುಕ್ತರ ಕಛೇರಿ,
ನೃಪತುಂಗ ರಸ್ತೆ, ಬೆಂಗಳೂರು – 560 001.

ಸಂಖ್ಯೆ:ಸಿ8[2]ಶಾಶಿಅ:ಹೊಪ್ರೌಶಾಅ:62:2010–11 ದಿ:31-[illegible]-2010

ನಮೂನೆ–2
[ನಿಯಮ 3 ಉಪನಿಯಮ 5(ಬಿ)]
ಪ್ರಮಾಣ ಪತ್ರ ಸಂಖ್ಯೆ: 130/2010–11

ಭೀಮಚಂದ್ರ ಎಜುಕೇಷನಲ್ ಟ್ರಸ್ಟ್ [ರಿ], ನಂ.212, 38ನೇ ಕ್ರಾಸ್, 8ನೇ ಬ್ಲಾಕ್ ಜಯನಗರ, ಬೆಂಗಳೂರು – 560 082 ಇವರ ಗವರ್ನಿಂಗ್ ಕೌನ್ಸಿಲ್‌ನ ಈ ಶಿಕ್ಷಣ ಸಂಸ್ಥೆಯ ಹೊಸ ಪ್ರೌಢಶಾಲೆಯನ್ನು ಕರ್ನಾಟಕ ಶಿಕ್ಷಣ ಕಾಯ್ದೆ 1983 [ಕರ್ನಾಟಕ ಆಕ್ಟ್ 1995] ಸೆಕ್ಷನ್ 31ರಂತೆ ದಿ: –05–2010 ರಂದು ಈ ಮೇಲೆ ಸಮೂದಿಸಿರುವ ಶಿಕ್ಷಣ ಸಂಸ್ಥೆಗೆ 2010–11ನೇ ಸಾಲಿನಿಂದ ಹೊಸ ಶಾಲೆ ಪ್ರಾರಂಭಿಸಲು ಮಂಜೂರಾತಿ ನೀಡಿ ನೊಂದಾಯಿಸಲಾಗಿದೆ ಎಂದು ಪ್ರಮಾಣೀಕರಿಸಲಾಗಿದೆ.

| | | |
|---|---|---|
| 1. | ಕ್ರಮ ಸಂಖ್ಯೆ | : 130/2010–11 |
| 2. | ಶಾಲೆಯ ಹೆಸರು ಮತ್ತು ವಿಳಾಸ | : ಹಿಲ್‌ಸೈಡ್ ಪಬ್ಲಿಕ್ ಸ್ಕೂಲ್, ನಂ.9, ರಘುವನಹಳ್ಳಿ, ಗುಬ್ಬಲಾಳ ಕ್ರಾಸ್ ಕನಕಪುರ ಮುಖ್ಯ ರಸ್ತೆ, ಬೆಂಗಳೂರು – 560 062 |
| 3. | ಅನುಮತಿ ನೀಡಿದ ತರಗತಿ | : 8ನೇ ತರಗತಿ, 9ನೇ ತರಗತಿ, 10ನೇ ತರಗತಿ |
| 4. | ಪ್ರಾರಂಭಿಸಬೇಕಾದ ತರಗತಿಗಳು | : 8ನೇ ತರಗತಿ, 9ನೇ ತರಗತಿ, 10ನೇ ತರಗತಿ. |
| 5. | ಶೈಕ್ಷಣಿಕ ವರ್ಷ | : 2010–11 2011–12 2012–13 |
| 6. | ಅನುಮತಿ ನೀಡಿದ ಮಾಧ್ಯಮ | : ಆಂಗ್ಲ ಮಾಧ್ಯಮ |
| 7. | ಶುಲ್ಕ ಪಾವತಿ ಮಾಡಿರುವುದು | : ಡಿ.ಡಿ. ನಂ. 916910 ದಿ: 18–02–2008 ರೂ. 10,000/– |

ಸದರಿ ಶಿಕ್ಷಣ ಸಂಸ್ಥೆಯನ್ನು ಕ್ರಮ ಸಂಖ್ಯೆ: 130/2010–11 ಪುಟ ಸಂಖ್ಯೆ 286 ವಾಲ್ಯೂಂ ಸಂಖ್ಯೆ: 08 ರಲ್ಲಿ ಈ ಕಛೇರಿಯಲ್ಲಿನ ಶೈಕ್ಷಣಿಕ ಸಂಸ್ಥೆಗಳ ನೊಂದಣಿ ವಹಿಯಲ್ಲಿ ನೊಂದಾಯಿಸಲಾಗಿದೆ.

1. ಈ ನೋಂದಾವಣೆಯು ನಿಯಮ 3[5][4]ಕ್ಕೆ ಒಳಪಟ್ಟಿರುತ್ತದೆ.
2. ಗವರ್ನಿಂಗ್ ಕೌನ್ಸಿಲ್ ಇವರು ನಿಯಮ 4[4]ರಲ್ಲಿ ತಿಳಿಸಿರುವ ಎಲ್ಲಾ ಷರತ್ತುಗಳನ್ನು ಕಡ್ಡಾಯವಾಗಿ ಪಾಲಿಸಬೇಕು.
3. ಶಾಲಾ ನಿವೇಶನ, ವಿಸ್ತೀರ್ಣ, ಕಟ್ಟಡ, ಪೀಠೋಪಕರಣಗಳು, ಸಿಬ್ಬಂದಿ ವರ್ಗ ಆರ್ಥಿಕ ಅನುಕೂಲತೆಗಳು ಮುಂತಾದವುಗಳನ್ನು ಒದಗಿಸುವ ಷರತ್ತಿಗೆ ಒಳಪಟ್ಟಿರುತ್ತದೆ.
4. ಸದರಿ ಶಿಕ್ಷಣ ಸಂಸ್ಥೆಯು ಯಾವುದೇ ಸಂದರ್ಭದಲ್ಲಿಯೂ ಸರ್ಕಾರದ ಪೂರ್ವಾನುಮತಿ ಇಲ್ಲದೆ ಹೆಚ್ಚಿನ ವಿಭಾಗಗಳನ್ನು ತೆರೆಯುವಂತಿಲ್ಲ.
5. ಶಾಲೆಯನ್ನು ಮಂಜೂರು ಮಾಡಿರುವ ಮಾಧ್ಯಮದಲ್ಲಿ ಮತ್ತು ಅದೇ ಸ್ಥಳದಲ್ಲಿ ಮಾತ್ರ ತೆರೆಯತಕ್ಕದ್ದು ಹಾಗೂ ಯಾವುದೇ ಕಾರಣಕ್ಕೂ ಸ್ಥಳ ಬದಲಾವಣೆ ಮಾಡಲು ಅವಕಾಶವಿರುವುದಿಲ್ಲ.
6. ಯಾವ ಆಡಳಿತ ಮಂಡಳಿಗೆ ಶಾಲೆ ನಡೆಸಲು ಅನುಮತಿ ನೀಡಲಾಗಿದೆಯೋ ಅದೇ ಮಂಡಳಿಯು ಅದೇ ಸ್ಥಳದಲ್ಲಿಯೇ ಮತ್ತು ಅದೇ ಹೆಸರಿನಲ್ಲಿ ನಡೆಸತಕ್ಕದ್ದು.
7. ಈ ಶಿಕ್ಷಣ ಸಂಸ್ಥೆಯವರು ಶಿಕ್ಷಣ ಸಂಸ್ಥೆಗಳಿಗೆ ಸಂಬಂಧಿಸಿದಂತೆ, ಜಾರಿಯಲ್ಲಿರುವ ಹಾಗೂ ಆಗಿಂದಾಗ್ಗೆ ಹೊರಡಿಸುವ ಎಲ್ಲಾ ಸರ್ಕಾರಿ ಆದೇಶಗಳು ಹಾಗೂ ನಿಯಮಗಳನ್ನು ಪಾಲಿಸತಕ್ಕದ್ದು. ಕರ್ನಾಟಕ ಶಿಕ್ಷಣ ಮಸೂದೆ 1983 [ಕರ್ನಾಟಕ ಆಕ್ಟ್ ಸಂಖ್ಯೆ:1-96] ಇದರಡಿಯಲ್ಲಿ ಬರುವ ಕಾಯ್ದೆಗಳನ್ನು ಮತ್ತು ಅದರಡಿಯಲ್ಲಿ ರಚಿಸಲಾಗಿರುವ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.
8. ಈ ಪ್ರೌಢಶಾಲಾ ನೊಂದಾವಣೆಯಂತೆ ಸರ್ಕಾರಿ ಅಧಿಸೂಚನೆ ಸಂಇಡಿ:175:ಪಿಎಂಸಿ:95, ದಿ:07–09–1998 ಮತ್ತು ದಿ:29–12–1998ರ ಪ್ರಕಾರ ಶಾಶ್ವತ ಅನುದಾನ ರಹಿತವಾಗಿರುತ್ತದೆ. ಆಡಳಿತ ಮಂಡಳಿಯು ಸರ್ಕಾರದಿಂದ ಯಾವುದೇ ಅನುದಾನವನ್ನು ಬಯಸುವುದಿಲ್ಲವೆಂದು ರೂ. 10–00 ಛಾಪಾ ಕಾಗದಲ್ಲಿ ನೋಟರಿಯವರ ಮುಂದೆ ಪ್ರಮಾಣೀಕರಿಸಿದ ಒಪ್ಪಿಗೆ ಪತ್ರವನ್ನು ನೀಡುವುದು.
9. ಕರ್ನಾಟಕ ಖಾಸಗಿ ಶಿಕ್ಷಣ ಸಂಸ್ಥೆಗಳು [ಖಾಸಗಿ ಅನುದಾನಿತ ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಸಂಸ್ಥೆಗಳ ನೌಕರರ ನೇಮಕಾತಿ, ಸೇವಾ ಷರತ್ತು ಮತ್ತು ನಿಬಂಧನೆಗಳು] ನಿಯಮ 1999ರ ನಿಯಮಗಳನ್ನು ತಪ್ಪದೇ ಪಾಲಿಸತಕ್ಕದ್ದು.

For Bheemchandra Educational Trust

Secretary

10. ಇಲಾಖೆ ಹಾಗೂ ಸರ್ಕಾರ ನಿಗಧಿಪಡಿಸಿದ ಪಠ್ಯಪುಸ್ತಕ, ಪರೀಕ್ಷಾ ಕ್ರಮಗಳನ್ನು ಮಾತ್ರ ತಪ್ಪದೇ ಅಳವಡಿಸತಕ್ಕದ್ದು.

11. ಅನುಮತಿ ನೀಡಿದ ಪ್ರತಿಯೊಂದು ತರಗತಿಯಲ್ಲಿ ಮಕ್ಕಳ ಹಾಗೂ ಶಿಕ್ಷಕರ ಅನುಪಾತವನ್ನು ನಿಯಮಾನುಸಾರ ಇರತಕ್ಕದ್ದು. ಪ್ರತಿ ತರಗತಿಯಲ್ಲಿ ಕನಿಷ್ಠ ಹಾಜರಾತಿ 25 ಇರತಕ್ಕದ್ದು.

12. ತರಬೇತಿ ಹೊಂದಿದ ಹಾಗೂ ಇಲಾಖೆಯ ನಿಯಮಗಳ ಪ್ರಕಾರ ವಿದ್ಯಾರ್ಹತೆ ಹೊಂದಿದ ಶಿಕ್ಷಕರನ್ನು ಮಾತ್ರ ನೇಮಿಸತಕ್ಕದ್ದು.

13. ಕರ್ನಾಟಕ ಶಿಕ್ಷಣ ಮಸೂದೆ ಅನುಚ್ಛೇದ 8ರ ಅಡಿಯಲ್ಲಿ ಉಪಬಂಧ 36-39ರಂತೆ ನೊಂದಾಯಿಸಿದ ಎಲ್ಲಾ ಶಾಲೆಗಳ ಮಾನ್ಯತೆ ಹಾಗೂ ತಾತ್ಕಾಲಿಕ ಮಾನ್ಯತೆ ವ್ಯಾಪ್ತಿಗೆ ಬರುವುದು.

14. ಪ್ರತಿ ವರ್ಷವು ವಿದ್ಯಾರ್ಥಿಗಳ ವೈದ್ಯಕೀಯ ಪರೀಕ್ಷೆಯನ್ನು ನಿಯಮಾನುಸಾರ ಮಾಡಿಸತಕ್ಕದ್ದು.

15. ಶಾಲೆಯನ್ನು ಪ್ರಾರಂಭಿಸಲು ಸಂಸ್ಥೆಯವರು ಭದ್ರತಾ ಠೇವಣಿಯನ್ನು ಜಿಲ್ಲಾ ಉಪನಿರ್ದೇಶಕರು ಹಾಗೂ ಆಡಳಿತ ಮಂಡಳಿಯ ಜಂಟಿ ಖಾತೆಯಲ್ಲಿ ಇರಿಸತಕ್ಕದ್ದು.

16. ಕರ್ನಾಟಕ ಶಿಕ್ಷಣ ಮಸೂದೆ ನಿಯಮಗಳ ಪ್ರಕಾರ ಶಾಲೆಗೆ ಬೇಕಾದ ಪೀಠೋಪಕರಣ, ಪಾಠೋಪಕರಣ, ಗ್ರಂಥಾಲಯ ಪುಸ್ತಕಗಳು, ಆಟದ ಮೈದಾನ, ಶಾಲಾ ಕಟ್ಟಡ ಮುಂತಾದ ಸೌಲಭ್ಯಗಳನ್ನು ಒಂದು ವರ್ಷದಲ್ಲಿ ಒದಗಿಸಿಕೊಳ್ಳತಕ್ಕದ್ದು. ಇಲ್ಲದಿದ್ದಲ್ಲಿ ನೋಂದಣಿಯನ್ನು ರದ್ದುಗೊಳಿಸಲಾಗುವುದು.

17. ಶಾಲೆ ತೆರೆದ ಬಗ್ಗೆ ಹಾಗೂ ವಿದ್ಯಾರ್ಥಿಗಳ ದಾಖಲಾತಿಯನ್ನು ಶಾಲೆ ನೋಂದಣಿಯಾದ ಅಥವಾ ಶೈಕ್ಷಣಿಕ ವರ್ಷ ಪ್ರಾರಂಭದ ಮೂರು ತಿಂಗಳ ಒಳಗಾಗಿ ಈ ಕಛೇರಿಗೆ ತಿಳಿಸಬೇಕು. ಒಂದು ವೇಳೆ ಶಾಲೆ ತೆರೆಯದಿದ್ದಲ್ಲಿ ಹಾಗೂ ಯಾವುದೇ ಷರತ್ತುಗಳನ್ನು ಪಾಲಿಸದಿದ್ದಲ್ಲಿ ಈ ಆದೇಶ ತಾನಾಗೇ ರದ್ದಾಗುವುದು.

18. ಶಾಲೆಯಲ್ಲಿ ಹೆಣ್ಣು ಮಕ್ಕಳಿಗೆ ಮತ್ತು ಗಂಡು ಮಕ್ಕಳಿಗೆ ಪ್ರತ್ಯೇಕವಾದ ಶೌಚಾಲಯದ ವ್ಯವಸ್ಥೆಯನ್ನು ಕಡ್ಡಾಯವಾಗಿ ಒದಗಿಸಬೇಕು ಮತ್ತು ಕುಡಿಯುವ ನೀರಿನ ವ್ಯವಸ್ಥೆಯನ್ನು ಒದಗಿಸಬೇಕು.

19. ಪ್ರಥಮ ಮಾನ್ಯತೆಗಾಗಿ ಉಪನಿರ್ದೇಶಕರಿಗೆ ಪ್ರಸ್ತಾವನೆ ಸಲ್ಲಿಸುವುದು, ಉಪನಿರ್ದೇಶಕರು ಶಿಕ್ಷಣ ಕಾಯ್ದೆ ಮತ್ತು ಸರ್ಕಾರದ ಆದೇಶ ದಿನಾಂಕ30-09-2007ರ ಅನುಬಂಧ-3ರ ಚೆಕ್‌ಲಿಸ್ಟ್‌ನಲ್ಲಿ ಮಾಹಿತಿ ಪಡೆದು ಈ ಆಧಾರದ ಮೇಲೆ ಶಾಲೆ ಪ್ರಾರಂಭಿಸಿದ ಮೂರು ತಿಂಗಳೊಳಗೆ ಕಡ್ಡಾಯವಾಗಿ ಪ್ರಥಮ ಮಾನ್ಯತೆ ನೀಡುವುದು, ನಿಗದಿತ ಅವಧಿಯೊಳಗೆ ಮಾನ್ಯತೆ ಪಡೆಯದಿದ್ದಲ್ಲಿ ನೋಂದಣಿ ತಂತಾನೆ ರದ್ದಾಗುತ್ತದೆ.

20. ಶಾಲೆಯ ಕಟ್ಟಡ ಸುರಕ್ಷತೆಯ ಬಗ್ಗೆ ಬೆಂಕಿ ಬಿರುಗಾಳಿ ವಿದ್ಯುತ್ ಅಪಘಾತ ಮುಂತಾದ ಅವಗಢಗಳಿಂದ ಸುರಕ್ಷಿತವಾಗಿರುವ ಬಗ್ಗೆ ಪರಿಶೀಲಿಸಿ ಖಚಿತಪಡಿಸಿಕೊಳ್ಳುವುದು.

ದಿ:31-05-2010
ಸ್ಥಳ : ಬೆಂಗಳೂರು

ಆಯುಕ್ತರು
ಹಾಗೂ ನೊಂದಣಿ ಅಧಿಕಾರಿ
ಸಾರ್ವಜನಿಕ ಶಿಕ್ಷಣ ಇಲಾಖೆ

ಗೆ:

1. ಸರ್ಕಾರದ ಕಾರ್ಯದರ್ಶಿಗಳು, ಪ್ರಾಥಮಿಕ ಮತ್ತು ಪ್ರೌಢ ಶಿಕ್ಷಣ ಬಹುಮಹಡಿಗಳ ಕಟ್ಟಡ, ಬೆಂಗಳೂರು, ಇವರಿಗೆ ಮಾಹಿತಿಗಾಗಿ ಸಲ್ಲಿಸಿದೆ.
2. ಮುಖ್ಯ ಕಾರ್ಯನಿರ್ವಹಣಾಧಿಕಾರಿಗಳು, ಬೆಂಗಳೂರು ನಗರ ಜಿಲ್ಲಾ ಪಂಚಾಯತ್, ಬೆಂಗಳೂರು
3. ಜಿಲ್ಲಾ ಉಪ ನಿರ್ದೇಶಕರು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ದಕ್ಷಿಣ ಜಿಲ್ಲೆ
4. ಕ್ಷೇತ್ರ ಶಿಕ್ಷಣಾಧಿಕಾರಿಗಳು, ಸಾರ್ವಜನಿಕ ಶಿಕ್ಷಣ ಇಲಾಖೆ, ಬೆಂಗಳೂರು ದಕ್ಷಿಣ ವಲಯ- ಬೆಂಗಳೂರು
5. ಕಾರ್ಯದರ್ಶಿಗಳು, ಭೀಮಚಂದ್ರ ಎಜುಕೇಷನಲ್ ಟ್ರಸ್ಟ್ [ರಿ], ನಂ.212, 38ನೇ ಕ್ರಾಸ್, 8ನೇ ಬ್ಲಾಕ್ ಜಯನಗರ, ಬೆಂಗಳೂರು - 560 082
6. ಕಛೇರಿ ಪ್ರತಿ.

\\Typing3server\d\E\EST2\5773 11.doc

Recent copy

# ಕರ್ನಾಟಕ ಸರ್ಕಾರ

## ಸಾರ್ವಜನಿಕ ಶಿಕ್ಷಣ ಇಲಾಖೆ

## ಉಪನಿರ್ದೇಶಕರ ಕಛೇರಿ , ಸಾರ್ವಜನಿಕ ಶಿಕ್ಷಣ ಇಲಾಖೆ,BENGALURU SOUTH ಜಿಲ್ಲೆ

## ಮಾನ್ಯತೆ ನವೀಕರಣ ಪ್ರಮಾಣ ಪತ್ರ

**ಸಂಖ್ಯೆ** : 60780

**ದಿನಾಂಕ** : 05-Oct-2024

**ವಿಷಯ** : ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ 2009 ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ 1983 ಯೊಳಗೆ ರಚಿತವಾಗಿರುವ ನಿಯಮಗಳನ್ವಯ ಶಾಲಾ ಮಾನ್ಯತೆಯನ್ನು ನೀಡುವ ಬಗ್ಗೆ.

&&&&

ಮೇಲ್ಕಂಡ ವಿಷಯಕ್ಕೆ ಸಂಬಂಧಿಸಿದಂತೆ **BHEEMCHANDRA EDUCATION TRUST** ಆಡಳಿತ ಮಂಡಳಿಯು **29200142017** ಡೈಸ್ ಕೋಡ್ ಸಂಖ್ಯೆ **hillside public school_Raghuvanahalli** ಶಾಲೆಗೆ [ವಿಳಾಸ], 1_10 ತರಗತಿವರಗೆ **English** ಮಾಧ್ಯಮಕ್ಕೆ ಶಾಲಾ ಮಾನ್ಯತೆಯನ್ನು ನವೀಕರಿಸಲು ಆನ್ಲೈನ್ನಲ್ಲಿ ಸಲ್ಲಿಸಿದ್ದ ಅರ್ಜಿಯಲ್ಲಿನ ದಾಖಲೆಗಳನ್ನು ಇಲಾಖೆಯ ಅಧಿಕಾರಿಗಳು ಪರಿಶೀಲಿಸಿ, ಈ ಕೆಳಕಂಡಂತೆ ಮಾನ್ಯತೆಯನ್ನು ನವೀಕರಿಸಿದೆ.

| ಕ್ರ.ಸಂ. | ವಿವರ | ಆನ್ಲೈನ್ ಅರ್ಜಿ ಸಂಖ್ಯೆ : 60780 |
|---|---|---|
| 1 | ಆಡಳಿತ ಮಂಡಳಿಯ ಹೆಸರು ಮತ್ತು ವಿಳಾಸ | BHEEMCHANDRA EDUCATION TRUST |
| 2 | ಶಾಲೆಯ ಹೆಸರು ಮತ್ತು ವಿಳಾಸ | hillside public school_Raghuvanahalli |
| 3 | ಡೈಸ್ ಕೋಡ್ ಸಂಖ್ಯೆ: | 29200142017 |
| 4 | ತರಗತಿ | 1 to 10 |
| 5 | ಮಾಧ್ಯಮ | English |
| 6 | ವಿಭಾಗ | 10 |
| 7 | ಶಾಲಾ ವಿಧ | Pvt. Unaided /Renewal Recognition |
| 8 | ಮಾನ್ಯತೆ ನವೀಕರಿಸಿರುವ ವರ್ಷ | 2024 2025 ಸಾಲಿನಿಂದ 2033 2034 ರವರೆಗೆ |

**ಷರತ್ತುಗಳು:**

1. ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ 2009, ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ 1983ರ ಅಡಿಯಲ್ಲಿ ಹಾಗೂ ಅದರ ಅಡಿಯಲ್ಲಿ ರಚಿತವಾದ ನಿಯಮಗಳ ಅನುಸಾರ ಶಾಲೆಯನ್ನು ನೋಂದಾಯಿಸಿ, ನೋಂದಾಯಿಸಿದ ತರಗತಿವರೆಗೆ ಮಾನ್ಯತೆಯನ್ನು ನವೀಕರಿಸಲಾಗಿದೆ. ಈ ತರಗತಿಗಳ ಹೊರತಾಗಿ ಹೆಚ್ಚುವರಿ ತರಗತಿಗಳನ್ನು ಮತ್ತು ಹೆಚ್ಚುವರಿ ವಿಭಾಗಗಳನ್ನು ನಡೆಸಲು ಅನುಮತಿ ಇರುವುದಿಲ್ಲ.

2. ಶಾಲೆಯು ಕರ್ನಾಟಕ ಶಿಕ್ಷಣ ಕಾಯ್ದೆ 1983 ಮತ್ತು ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ 2009 ಅದರಡಿಯಲ್ಲಿ ರಚಿತವಾದ ನಿಯಮಗಳ ಅಡಿಯಲ್ಲಿ ಕಾರ್ಯನಿರ್ವಹಿಸುವುದು.

For Bheemchandra Educational Trust

Secretary

3. ಮಕ್ಕಳ ಹಕ್ಕುಗಳ ಶಿಕ್ಷಣ ಕಾಯ್ದೆ 2009 ಆದರಡಿಯಲ್ಲಿ ರಚಿತವಾದ ನಿಯಮಗಳ ಅಡಿಯಲ್ಲಿ ಶೇಕಡಾ 25%ರಷ್ಟು ಸೀಟುಗಳನ್ನು ದುರ್ಬಲ ವರ್ಗದ ಮಕ್ಕಳಿಗೆ ಮೀಸಲಿಡುವುದು. ಆರ್.ಟಿ.ಇ ವ್ಯಾಪ್ತಿಗೆ ಒಳಪಡುವ ಶಾಲೆಗಳಿಗೆ ಸರ್ಕಾರವು ಮೀಸಲಿಟ್ಟ ಸೀಟುಗಳನ್ನು ಆರ್.ಟಿ.ಇ ಅಡಿಯಲ್ಲಿ ದಾಖಲಿಸಲು ಅಧಿಕಾರ ಹೊಂದಿರುತ್ತದೆ. [ಸರ್ಕಾರವು ಮಕ್ಕಳ ಪೋಷಕರು ವಾಸಿಸುವ ಅಕ್ಕ ಪಕ್ಕದ ಶಾಲೆಗಳಲ್ಲಿ ದಾಖಲಿಸಲು ಅನುಕೂಲವಾಗುವಂತೆ ನಿಯಮಗಳನ್ನು ರೂಪಿಸಿದ್ದು, ಅದರಂತೆ ಸರ್ಕಾರಿ, ಸರ್ಕಾರದಿಂದ ಅನುದಾನ ಪಡೆದ ಶಿಕ್ಷಣ ಸಂಸ್ಥೆಗಳು ಇದ್ದಲ್ಲಿ ಆ ಶಾಲೆಗೆ ಮಕ್ಕಳನ್ನು ದಾಖಲಿಸಲಾಗುವುದು] ಇಲ್ಲದಿದ್ದ ಪಕ್ಷದಲ್ಲಿ ಖಾಸಗಿ ಶಾಲೆಗಳು ಸರ್ಕಾರದಿಂದ ದಾಖಲಿಸುವ ಮಕ್ಕಳನ್ನು ದಾಖಲಿಸಿಕೊಂಡು ಪ್ರಾಥಮಿಕ ಹಂತದವರೆಗೆ ವಿದ್ಯಾಭ್ಯಾಸ ಮುಂದುವರೆಸಲು ಅವಕಾಶ ನೀಡುವುದು. ಈ ಮಕ್ಕಳನ್ನು ಯಾವುದೇ ತಾರತಮ್ಯವಿಲ್ಲದೆ ವ್ಯಾಸಂಗ ಮುಂದುವರೆಸಲು ಅವಕಾಶ ಕಲ್ಪಿಸುವುದು.

4. ಕಂಡಿಕೆ:3ರಲ್ಲಿ ವಿವರಿಸಿರುವಂತೆ ಆರ್.ಟಿ.ಇ ನಿಯಮದಡಿ ದಾಖಲಾದ ಮಕ್ಕಳ ಶುಲ್ಕಗಳನ್ನು ನಿಯಮಾನುಸಾರ ಸರ್ಕಾರವು ಬಿಡುಗಡೆ ಮಾಡುತ್ತದೆ. ಆದ್ದರಿಂದ ಈ ಮಕ್ಕಳಿಂದ ಯಾವುದೇ ಶುಲ್ಕವನ್ನು ವಸೂಲು ಮಾಡುವುದನ್ನು ನಿರ್ಭಂದಿಸಿದೆ.

5. ಶಾಲೆ ಮತ್ತು ಶಾಲೆಯ ಆಡಳಿತ ಮಂಡಳಿಯು ಯಾವುದೇ ತರವಾದ ಕ್ಯಾಪಿಟೇಷನ್ ಶುಲ್ಕವನ್ನು ಮತ್ತು ಸ್ವ ಇಚ್ಛೆಯಿಂದ ನೀಡುವ ಡೊನೇಷನ್ಗಳನ್ನು ಪೋಷಕರಿಂದ ದಾಖಲಾತಿ ಸಮಯದಲ್ಲಾಗಲೀ ಅಥವಾ ನಂತರದಲ್ಲಾಗಲೀ ಯಾವುದೇ ರೀತಿಯಾಗಿ ವಸೂಲು ಮಾಡುವುದನ್ನು ನಿರ್ಭಂದಿಸಿದೆ.

6. ಶಾಲೆಯು / ಆಡಳಿತ ಮಂಡಳಿಯು ತಮ್ಮ ಶಾಲೆಯಲ್ಲಿ ಮಕ್ಕಳ ಪೋಷಕರಿಂದ ವ್ಯಾಸಂಗ ಶುಲ್ಕವಾಗಿ ವಸೂಲು ಮಾಡುವ ಶುಲ್ಕದ ಮಾಹಿತಿಯನ್ನು ರಾಜ್ಯ ಸರ್ಕಾರದ ಅಧಿಸೂಚನ ಸಂಖ್ಯೆ: ಇಡಿ:31:ಪಿಜಿಸಿ:2019, ದಿನಾಂಕ:27.07.2019ರನ್ವಯ ಮಾಹಿತಿಗಾಳನ್ನು ಇಲಾಖಾ ವೆಬ್ಸೈಟ್ನಲ್ಲಿ ಹಾಗೂ ಶಾಲಾ ಸೂಚನಾ ಫಲಕದಲ್ಲಿ ಪ್ರಕಟಿಸುವುದು. ನಿಗದಿತ ಶುಲ್ಕಕ್ಕಿಂತ ಹೆಚ್ಚುವರಿ ಶುಲ್ಕವನ್ನು ವಸೂಲು ಮಾಡತಕ್ಕದ್ದಲ್ಲ.

7. ಶಾಲೆಯು / ಆಡಳಿತ ಮಂಡಳಿಯು ವಿದ್ಯಾರ್ಥಿಗಳನ್ನು ಸರ್ಕಾರವು ನಿಗದಿಪಡಿಸಿದೆ ಅವಧಿಯಲ್ಲಿಯೇ ದಾಖಲಾತಿ ಮಾಡಿಕೊಳ್ಳುವುದು.

8. ಶಾಲೆಯು / ಆಡಳಿತ ಮಂಡಳಿಯು ಈ ಕೆಳಕಂಡ ಅಂಶಗಳ ವಿರುದ್ಧ ದಾಖಲಾತಿಯನ್ನು ನಿರಾಕರಿಸುವಂತಿಲ್ಲ.

(i) ವಯಸ್ಸಿನ ಪುರಾವೆ ಕೊರತೆಯಿಂದಾಗಿ.

(ii) ಜಾತಿ, ಧರ್ಮ, ಹುಟ್ಟಿದ ಸ್ಥಳ, ಭಾಷೆಯ ಆಧಾರದ ಮೇಲೆ.

(iii) ಪ್ರವೇಶದ ವಿಸ್ತೃತ ಅವಧಿಯ ನಂತರ ಪ್ರವೇಶವನ್ನು ಕೋರಿದರೆ.

9. ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು, ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ಪ್ರಕಾರ ಎಲ್ಲಾ ಸುರಕ್ಷತಾ ಕ್ರಮಗಳನ್ನು ಕೈಗೊಳ್ಳುವುದು. [ಸಂಬಂಧಿಸಿದ ಪ್ರಾಧಿಕಾರಗಳಿಂದ ಅಗ್ನಿ ಸುರಕ್ಷತೆ ಮತ್ತು ಕಟ್ಟಡ ಸುರಕ್ಷತಾ ಪ್ರಮಾಣ ಪತ್ರ ಹಾಗೂ K.S.C.P.C.R ಮತ್ತು N.C.P.C.R ಪ್ರಕಾರ ಮಕ್ಕಳ ಕಲಿಕೆಯ ಸುರಕ್ಷತೆ].

10. ಶಾಲೆಯು / ಆಡಳಿತ ಮಂಡಳಿಯು ಈ ಕೆಳಕಂಡಂತೆ

(i) ಪ್ರವೇಶ ಪಡೆದ ಯಾವುದೇ ಮಗುವನ್ನು ಶಾಲೆಯಲ್ಲಿ ಪ್ರಾಥಮಿಕ ಶಿಕ್ಷಣ ಮತ್ತು ಮಾಧ್ಯಮ ಶಿಕ್ಷಣವನ್ನು ಪೂರ್ಣಗೊಳಿಸುವವರೆಗೆ ಯಾವುದೇ ತರಗತಿಯಲ್ಲಿ ಹಿಡಿದಿಟ್ಟುಕೊಳ್ಳಬಾರದು ಅಥವಾ ಶಾಲೆಯಿಂದ ಹೊರಹಾಕಬಾರದು.

(ii) ಯಾವುದೇ ಮಗುವನ್ನು ದೈಹಿಕ ಅಥವಾ ಮಾನಸಿಕವಾಗಿ ಕಿರುಕುಳಕ್ಕೆ ಒಳಪಡಿಸಬಾರದು.

(iii) ಪ್ರಾಥಮಿಕ ಶಿಕ್ಷಣ ಪೂರ್ಣಗೊಳ್ಳುವವರೆಗೆ ಯಾವುದೇ ಮಗು ಯಾವುದೇ ಬೋರ್ಡ್ ಪರೀಕ್ಷೆಯಲ್ಲಿ ಉತ್ತೀರ್ಣರಾಗುವ ಅಗತ್ಯವಿಲ್ಲ.

(iv) ಪ್ರಾಥಮಿಕ ಶಿಕ್ಷಣವನ್ನು ಪೂರ್ಣಗೊಳಿಸುವ ಪ್ರತಿ ಮಗುವಿಗೆ ಆರ್.ಟಿ.ಇ ನಿಯಮ 21 ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳಡಿಯಲ್ಲಿ ನಿಗದಿಪಡಿಸಿದಂತೆ ಪ್ರಮಾಣ ಪತ್ರವನ್ನು ನೀಡಲಾಗುತ್ತದೆ.

(v) ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು ಹಾಗೂ ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ನಿಬಂಧನೆಗಳ ಪ್ರಕಾರ ಶಾಲೆಯು ವಿಶೇಷ ಅಗತ್ಯತೆಗಳು / ವಿಶೇಷ ಮಕ್ಕಳನ್ನು ಹೊಂದಿರುವ ಮಕ್ಕಳನ್ನು ಸಹ ಸೇರಿಸಿಕೊಳ್ಳಬೇಕು.

(vi) ನೇಮಕಗೊಂಡ ಶಿಕ್ಷಕರು ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು ಹಾಗೂ ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ಹಾಗೂ ಸರ್ಕಾರಿ ಆದೇಶಗಳಲ್ಲಿ ಪ್ರಾಥಮಿಕ ಮತ್ತು ಪ್ರೌಢಶಾಲಾ ಶಿಕ್ಷಕರಿಗೆ ನಿಗದಿಪಡಿಸಿದಂತೆ ಕನಿಷ್ಠ ವಿದ್ಯಾರ್ಹತೆಗಳನ್ನು ಹೊಂದಿರತಕ್ಕದ್ದು.

(vii) ಶಿಕ್ಷಕರಿಗೆ ಪಾವತಿಸಬೇಕಾದ ವೇತನ ಮತ್ತು ಭತ್ಯಗಳು ಹಾಗೂ ಸೇವಾ ನಿಯಮಗಳು ಮತ್ತು ಷರತ್ತುಗಳು ರಾಜ್ಯ ಸರ್ಕಾರವು ಸೂಚಿಸಿದಂತೆ ಇರುತ್ತದೆ. ಮತ್ತು ಸರ್ಕಾರಿ ಅಧಿಸೂಚನೆ [ಭವಿಷ್ಯ ನಿಧಿ (Pಈ)] ಮತ್ತು ಪಾವತಿಸಬೇಕಾದ ಬ್ಯಾಂಕ್ ಮತ್ತು ಇತರೆ ವೇತನಗಳ ಮೂಲಕ ಶಿಕ್ಷಕರಿಗೆ ವೇತನವನ್ನು ಪಾವತಿಸಲಾಗುತ್ತದೆ. ಮತ್ತು ಉದ್ಯೋಗಿ ರಾಜ್ಯ ವಿಮೆಗ (ಇSI) ಒಳಪಡಿಸುತ್ತದೆ.

(viii) ಶಿಕ್ಷಕರು ಕಾಯ್ದೆ ಸೆಕ್ಷನ್ 24[1] ಮತ್ತು ಆರ್.ಟಿ.ಇ ಕಾಯ್ದೆ ಮತ್ತು ನಿಯಮಗಳು ಹಾಗೂ ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ನಿಯಮ 17ರ ಅಡಿಯಲ್ಲಿ ಸೂಚಿಸಲಾದ ಕರ್ತವ್ಯಗಳನ್ನು ನಿರ್ವಹಿಸುತ್ತಾರೆ ಮತ್ತು ಮೇಲ್ವಿಚಾರಣೆ ಪರಿಗಣನೆಗಳಿಗಾಗಿ ಖಾಸಗಿ ಟ್ಯೂಷನ್ಗಳಲ್ಲಿ ತಮ್ಮನ್ನು ತೊಡಗಿಸಿಕೊಳ್ಳುವುದಿಲ್ಲ.

For Bheemchandra Educational Tr...

Secretary

11. ಶಾಲೆಯು ಸಂಯೋಜಿತವಾಗಿರುವ ಶೈಕ್ಷಣಿಕ ರಾಜ್ಯ ಪಠ್ಯಕ್ರಮ ಮತ್ತು ರಾಜ್ಯ ಪಠ್ಯ ಪುಸ್ತಕಗಳನ್ನು ಅನುಸರಿಸುವುದು.

12. ಕರ್ನಾಟಕ ಶಿಕ್ಷಣ ಕಾಯ್ದೆ ಸೆಕ್ಷನ್ 19ರಲ್ಲಿ ನಿರ್ದಿಷ್ಟಪಡಿಸಿದಂತೆ ಶಾಲೆಯು ನಿಯಮಗಳು ಮತ್ತು ಮಾನದಂಡಗಳನ್ನು ನಿರ್ವಹಿಸುವುದು. ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳಲ್ಲಿ ಸೂಚಿಸಿರುವಂತೆ ಇಲಾಖಾ ಸಿಬ್ಬಂದಿಗಳನ್ನು ನೇಮಿಸುವುದು.

13. ಶಾಲೆಗೆ ಸಂಬಂಧಿಸಿದ ಶಾಲಾ ಕಟ್ಟಡಗಳು ಮತ್ತು ಇತರ ಮೂಲಭೂತ ಸೌಕರ್ಯಗಳನ್ನು ಹಗಲು ಅಥವಾ ರಾತ್ರಿಯಲ್ಲಿ ಯಾವುದೇ ವಾಣಿಜ್ಯ ಚಟುವಟಿಕೆಗಳಿಗೆ ಅಥವಾ ರಾಜಕೀಯ ಮತ್ತು ಶೈಕ್ಷಣಿಕೇತರ ಚಟುವಟಿಕೆಗಳಿಗೆ ನೀಡಬಾರದು.

14. ಶಾಲೆಯನ್ನು ಯಾವುದೇ ವ್ಯಕ್ತಿ ಅಥವಾ ಗುಂಪು ಅಥವಾ ಸಂಘದ ಲಾಭಕ್ಕಾಗಿ ನಡೆಸಬಾರದು.

15. ಶಾಲೆಯನ್ನು ಚಾರ್ಟೆಡ್ ಅಕೌಂಟೆಂಟ್ನಿಂದ ಆಡಿಟ್ ಮಾಡಿಸಿ, ಪ್ರತಿಯನ್ನು ಪ್ರತಿ ವರ್ಷ ಜೂನ್ ಅಂತ್ಯದೊಳಗೆ ಉಪನಿರ್ದೇಶಕರು / ಕ್ಷೇತ್ರ ಶಿಕ್ಷಣಾಧಿಕಾರಿಗಳಿಗೆ ಸಲ್ಲಿಸುವುದು.

16. ಸರ್ಕಾರಿ ಅಧಿಸೂಚನೆಯ [ಕನ್ನಡ ಭಾಷಾ ನೀತಿ 2016] ಪ್ರಕಾರ ಶಾಲೆಯು ಭಾಷಾ ನೀತಿಯನ್ನು ಅನುಸರಿಸುವುದು.

17. ಆರ್.ಟಿ.ಇ ಕಾಯ್ದೆ ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ ಮತ್ತು ನಿಯಮಗಳ ಪ್ರಕಾರ ಆಡಳಿತ ಮಂಡಳಿ ಮತ್ತು ಶಿಕ್ಷಕರುಗಳು ಕಾರ್ಯನಿರ್ವಹಿಸುವುದು.

18. ಶಾಲೆ / ಆಡಳಿತ ಮಂಡಳಿಯು ಸರ್ಕಾರ ಮತ್ತು ಇಲಾಖೆಯ ನಿಯಮ ಮತ್ತು ನಿರ್ದೇಶನವನ್ನ ತಪ್ಪದೇ ಪಾಲಿಸುವುದು.

19. ಪ್ರತಿ ವರ್ಷದ ಮಾರ್ಚ್ ಅಂತ್ಯದ ಒಳಗಾಗಿ ಎಸ್.ಎ.ಟಿ.ಎಸ್ನಲ್ಲಿ ಶಾಲಾ ಮಾಹಿತಿಯನ್ನು ನಿಯಮನುಸಾರ ಅಪ್ಡೇಟ್ ಮಾಡುವುದನ್ನು ಕಡ್ಡಾಯಗೊಳಿಸಿದೆ.

20. ಮೇಲಿನ ಷರತ್ತುಗಳನ್ನು ಉಲ್ಲಂಘಿಸಿದ್ದಲ್ಲಿ ಆರ್.ಟಿ.ಇ ಕಾಯ್ದೆ 2009 ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ 1983ರಡಿಯಲ್ಲಿ ರಚಿತವಾಗಿರುವ ನಿಯಮಗಳ ಅನುಸಾರ ಶಾಲೆಯ ಮಾನ್ಯತೆಯನ್ನು ರದ್ದುಪಡಿಸಲಾಗುವುದು.

21. ಶಾಲಾ ಮಾನ್ಯತೆ ಪ್ರಕ್ರಿಯೆ ಪೂರ್ಣಗೊಂಡ ನಂತರ ಆಡಳಿತ ಮಂಡಳಿಯು ಆನ್ ಲೈನ್ ನಲ್ಲಿ ಸಲ್ಲಿಸಿದ ಅರ್ಜಿಯಲ್ಲಿನ ಸಂಪೂರ್ಣ ದಾಖಲೆ/ ಮಾಹಿತಿಗಳನ್ನು ಇಲಾಖಾ ವೆಬ್ ಸೈಟ್ ನಲ್ಲಿ ಸಾರ್ವಜನಿಕವಾಗಿ ವೀಕ್ಷಿಸಲು ಅನುವುಮಾಡಿಕೊಡಲಾಗುವುದು.

22. ಮೇಲಿನ ಷರತ್ತುಗಳನ್ನು ಉಲ್ಲಂಘಿಸಿದ್ದಲ್ಲಿ ಆರ್.ಟಿ.ಇ ಕಾಯ್ದೆ 2009 ಮತ್ತು ಕರ್ನಾಟಕ ಶಿಕ್ಷಣ ಕಾಯ್ದೆ 1983ರಡಿಯಲ್ಲಿ ರಚಿತವಾಗಿರುವ ನಿಯಮಗಳ ಅನುಸಾರ ಶಾಲೆಯ ಮಾನ್ಯತೆಯನ್ನು ರದ್ದುಪಡಿಸಲಾಗುವುದು.

23. ಸಕ್ಷಮ ಪ್ರಾಧಿಕಾರದಿಂದ ಪಡೆದ ಸುರಕ್ಷತಾ ಪ್ರಮಾಣ ಪತ್ರಗಳು ಮತ್ತು ಲೀಸ್ ಕರಾರು ಪತ್ರ ದಾಖಲೆಗಳನ್ನು ಅವುಗಳ ಅವಧಿ ಮುಗಿದ 1 ತಿಂಗಳ ಒಳಗಾಗಿ ನವೀಕರಿಸಿ SATS ನಲ್ಲಿ ಕಡ್ಡಾಯವಾಗಿ ಅಪ್ ಲೋಡ್ ಮಾಡುವುದು.

ಉಪನಿರ್ದೇಶಕರು(ಆಡಳಿತ)

ಸಾರ್ವಜನಿಕ ಶಿಕ್ಷಣ ಇಲಾಖೆ

**BENGALURU SOUTH**
**(2920)** ಜಿಲ್ಲೆ

ಗೆ,

1. ಸಂಬಂಧಿಸಿದ ಆಡಳಿತ ಮಂಡಳಿ **BHEEMCHANDRA EDUCATION TRUST**

2. ಮುಖ್ಯ ಶಿಕ್ಷಕರು, **/Raghuvanahalli/hillside public school**ಶಾಲೆ ಮತ್ತು ವಿಳಾಸ

3. ಕ್ಷೇತ್ರ ಶಿಕ್ಷಣಾಧಿಕಾರಿಗಳು,**SOUTH1 (292001)** ತಾಲ್ಲೂಕು/ವಲಯ **BENGALURU SOUTH (2920)** ಜಿಲ್ಲೆ.

4. ಕಛೇರಿ ಪ್ರತಿ.

For Bheemchandra Educational Trust
Secretary

Digitally signed by NINGARAJAPPA K B
Date: 2024.10.24 00:18:51 -07:00